KACM510004592025

# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯಃ ನ.ರಾ.ಪುರ

## ಸಿ.ಸಿ. ನಂಃ **164/2025**

ಫಿರ್ಯಾದುದಾರರು : ಸರ್ಕಾರದ ಪರವಾಗಿ ಎನ್ ಆರ್ ಪುರ ಪೊಲೀಸರು

:ವಿ:

ಆರೋಪಿತ : ಜಾರ್ಜ್ ಎಂ.ಎ., ಬಿನ್ ಅಂಥೋಣಿ,
48 ವರ್ಷ, ಕೂಲಿ ಕೆಲಸ, ವಾಸಃ ಬೈಪಾಸ್ ರಸ್ತೆ,
ಮೆಣಸೂರು ಗ್ರಾಮ, ನ.ರಾ.ಪುರ ತಾಲ್ಲೂಕು.

- - -

## ದೋಷಾರೋಪಣೆ

ಶ್ರೀ ರಘುನಾಥಗೌಡ, ಕೆ.ಟಿ., ಬಿ.ಕಾಂ. ಎಲ್.ಎಲ್.ಬಿ. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ., ನ.ರಾ.ಪುರ ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ನ.ರಾ.ಪುರ ಪೊಲೀಸ್ ಠಾಣಾ ವ್ಯಾಪ್ತಿಯ ಮೆಣಸೂರು ಗ್ರಾಮದ ಬೈಪಾಸ್ ರಸ್ತೆ ವಾಸಿಯಾದ ಚಾಸಾ-1 ರವರಿಗೆ ಆರೋಪಿಯಾದ ನೀವು ಸುಮಾರು 17 ವರ್ಷಗಳ ಹಿಂದೆ ಮದುವೆಯಾಗಿದ್ದು, ಮದುವೆಯಾದ ಹೊಸತರಲ್ಲಿ ಚೆನ್ನಾಗಿ ನೋಡಿಕೊಂಡಿದ್ದು, ಆನಂತರದ ದಿನಗಳಲ್ಲಿ ಚಾಸಾ-1 ರವರಿಗೆ ಆಗ್ಗಾಗ್ಗೆ ಹೊಡೆಯುವುದು, ಬೈಯುವುದು ಮಾಡಿ ದೈಹಿಕ ಮತ್ತು ಮಾನಸಿಕ ಹಿಂಸೆ ನೀಡುತ್ತಿದ್ದು, ಆ ಮೂಲಕ ನೀವು ಕಲಂ.85 ರ ಭಾರತೀಯ ನ್ಯಾಯ ಸಂಹಿತೆಯ ಪ್ರಕಾರ ಶಿಕ್ಷಾರ್ಹವಾದ ಅಪರಾಧವನ್ನು ನನ್ನ ಸಂಜ್ಞೇಯದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ನಂತರ ಚಾಸಾ-1 ರವರು ಆರೋಪಿಯಾದ ನಿಮ್ಮ ಜೊತೆ ಮತ್ತು ತಮ್ಮ ಮಕ್ಕಳಾದ ಚಾಸಾ-2 ಮತ್ತು 3 ರವರೊಂದಿಗೆ ಮೊಣಸೂರು ಗ್ರಾಮದ ಬೈಪಾಸ್ ರಸ್ತೆಯಲ್ಲಿ ಮನೆ ಮಾಡಿಕೊಂಡಿದ್ದು, ದಿನಾಂಕಃ 17.07.2025 ರಂದು ಸಂಜೆ 7-30 ರ ಸುಮಾರಿಗೆ ಆರೋಪಿಯಾದ ನೀವು ತಮ್ಮ ಮಗಳಾದ ಚಾಸಾ-3 ರವರಿಗೆ ಕೈಯಿಂದ ಹೊಡೆಯುತ್ತಿದ್ದಾಗ ಚಾಸಾ-1 ರವರು ಏಕೆ ಹೊಡೆಯುತ್ತಿದ್ದೀರಾ ಎಂದು ಕೇಳಿದಾಗ ಸದರಿಯವರಿಗೆ ಅವಾಚ್ಯ ಶಬ್ಧಗಳಿಂದ ಬೈದಿದ್ದು, ಆ ಮೂಲಕ ನೀವು ಕಲಂ.352 ರ ಭಾರತೀಯ ನ್ಯಾಯ ಸಂಹಿತೆಯ ಪ್ರಕಾರ

ಶಿಕ್ಷಾರ್ಹವಾದ ಅಪರಾಧವನ್ನು ನನ್ನ ಸಂಜ್ಞೇಯದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಚಾಸಾ-1 ರವರಿಗೆ ನೀರೊಲೆಗೆ ಊದುವ ಪೈಪ್ ನಿಂದ ಮುಖಕ್ಕೆ, ಮೈ ಕೈಗೆ ಸ್ವ ಇಚ್ಛೆಯಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿ, ಆ ಮೂಲಕ ನೀವು ಕಲಂ.118(1)ರ ಭಾರತೀಯ ನ್ಯಾಯ ಸಂಹಿತೆಯ ಪ್ರಕಾರ ಶಿಕ್ಷಾರ್ಹವಾದ ಅಪರಾಧವನ್ನು ನನ್ನ ಸಂಜ್ಞೇಯದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಚಾಸಾ-1 ರವರಿಗೆ ನೀರೊಲೆಗೆ ಊದುವ ಪೈಪ್ ನಿಂದ ಬಲಗೈಗೆ ಹೊಡೆದು ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿ, ಆ ಮೂಲಕ ನೀವು ಕಲಂ.118(2)ರ ಭಾರತೀಯ ನ್ಯಾಯ ಸಂಹಿತೆಯ ಪ್ರಕಾರ ಶಿಕ್ಷಾರ್ಹವಾದ ಅಪರಾಧವನ್ನು ನನ್ನ ಸಂಜ್ಞೇಯದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಚಾಸಾ-1 ರವರಿಗೆ ಉದ್ದೇಶಪೂರ್ವಕವಾಗಿ ಹೊಡೆದು ಗಾಯಗೊಳಿಸಿದ್ದು, ಆ ಮೂಲಕ ನೀವು ಕಲಂ.115(2)ರ ಭಾರತೀಯ ನ್ಯಾಯ ಸಂಹಿತೆಯ ಪ್ರಕಾರ ಶಿಕ್ಷಾರ್ಹವಾದ ಅಪರಾಧವನ್ನು ನನ್ನ ಸಂಜ್ಞೇಯದಲ್ಲಿ ಎಸಗಿರುತ್ತೀರಿ.

ಪ್ರಃ1: ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೇ?

ಉ : ತಿಳಿಯಿತು.

ಪ್ರಃ2: ತಪ್ಪು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆ ಆಗಬೇಕಾ?

ಉ : [illegible]

ಈ ಮೇಲ್ಕಂಡ ದೋಷಾರೋಪಣೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಢೀಕರಿಸುತ್ತೇನೆ.

ದಿನಾಂಕ :19 ನೇ ದಿವಸ ಜನವರಿ ಮಾಹೆ 2026.

George M A

19/1/26.

(ರಘುನಾಥ ಗೌಡ ಕೆ.ಟಿ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರದನ್ಯಾದಂ., ನ.ರಾ. ಪುರ.